# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 259 |
| ಮಾನ್ಯ ಸದಸ್ಯರ ಹೆಸರು | ಶ್ರೀ ಅರವಿಂದ ಕುಮಾರ್ ಅರಳಿ<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದವರು | ಅಬಕಾರಿ ಸಚಿವರು |
| ಉತ್ತರಿಸಬೇಕಾದ ದಿನಾಂಕ | 17.02.2022 |

| ಕ್ರ..ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಬೀದರ್ ಜಿಲ್ಲೆಯಲ್ಲಿ MSIL ಮದ್ಯದ ಮಳಿಗೆಗಳೆಷ್ಟು; ಮಳಿಗೆಗಳಲ್ಲಿ MRP ದರಕ್ಕಿಂತ ಹೆಚ್ಚಿನ ಬೆಲೆಗೆ ಮದ್ಯ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಅಂತಹ ಮಳಿಗೆಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು) | ಬೀದರ ಜಿಲ್ಲೆಯಲ್ಲಿ ಜನವರಿ 2022ರ ಅಂತ್ಯಕ್ಕೆ ಒಟ್ಟು 33 MSIL (ಸಿಎಲ್ 11-ಸಿ) ಮದ್ಯ ಮಾರಾಟ ಮಳಿಗೆಗಳು ಕಾರ್ಯನಿರ್ವಹಿಸುತ್ತಿವೆ.<br><br>ಎಂ.ಎಸ್.ಐ.ಎಲ್ ಮದ್ಯ ಮಾರಾಟ ಮಳಿಗೆಗಳಲ್ಲಿ MRP ದರಕ್ಕಿಂತ ಹೆಚ್ಚಿನ ಬೆಲೆಗೆ ಮದ್ಯ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆ.<br><br>ಬೀದರ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ MRP ದರಕ್ಕಿಂತ ಹೆಚ್ಚಿನ ದರಕ್ಕೆ ಮದ್ಯ ಮಾರಾಟ ಮಾಡಿದಂತಹ ಒಟ್ಟು 22 ಮಳಿಗೆಗಳಿದ್ದು, ತಾಲ್ಲೂಕುವಾರು ವಿವರ ಕೆಳಕಂಡಂತಿದೆ; |

| ಕ್ರ.ಸಂ. | ತಾಲ್ಲೂಕು/ ವಲಯ | 2019-20 | 2020-21 | 2021-22 (ಜನವರಿ2022ರ ಅಂತ್ಯಕ್ಕೆ) |
|---|---|---|---|---|
| 1 | ಬೀದರ್ | 01 | 03 | 10 |
| 2 | ಬಸವಕಲ್ಯಾಣ | 01 | 03 | 02 |
| 3 | ಭಾಲ್ಕಿ | 02 | 02 | 01 |
| 4 | ಹುಮನಾಬಾದ್ | 01 | 0 | 03 |
| 5 | ಔರಾದ್ | 0 | 04 | 06 |
| | ಒಟ್ಟು | 05 | 12 | 22 |

| | | |
|---|---|---|
| ಆ | ಮದ್ಯದ ಮಳಿಗೆಗಳು ಹೆಚ್ಚಿನ ಬೆಲೆಗೆ ಮಾರುತ್ತಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದನ್ನು ತಡೆಗಟ್ಟುವಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು;(ಸಂಪೂರ್ಣವಾದ ಮಾಹಿತಿಯನ್ನು ಒದಗಿಸುವುದು) | ಸಾರ್ವಜನಿಕರಿಗೆ ಎಂ.ಎಸ್.ಐ.ಎಲ್ ಮದ್ಯ ಮಾರಾಟ ಮಳಿಗೆಗಳಲ್ಲಿ ಮದ್ಯವನ್ನು ಹೆಚ್ಚಿನ ಬೆಲೆಗೆ ಮಾರುತ್ತಿರುವುದನ್ನು ತಡೆಗಟ್ಟಲು ಇಲಾಖೆಯ ಕಾರ್ಯವ್ಯಾಪ್ತಿಯ ಎಲ್ಲಾ ವೃಂದದ ಅಧಿಕಾರಿಗಳಿಂದ ನಿಯಮಿತವಾಗಿ ತಪಾಸಣೆಗೊಳಪಡಿಸುತ್ತಿದ್ದು, ಈ ಸಂದರ್ಭದಲ್ಲಿ ಉಲ್ಲಂಘನೆಯು ಕಂಡುಬಂದ್ದಲ್ಲಿ ಸನ್ನದಿನ ವಿರುದ್ಧ ಪ್ರಕರಣಗಳನ್ನು ದಾಖಲಿಸಲಾಗುತ್ತಿದೆ.<br>ಈ ಪ್ರಕರಣಗಳು ಇಲಾಖೆಯಿಂದ ದಂಡ ವಿಧಿಸಿ ಇತ್ಯರ್ಥಪಡಿಸಬಹುದಾದ ಪ್ರಕರಣಗಳಾಗಿರುವುದರಿಂದ ಸೂಕ್ತ ದಂಡ ವಿಧಿಸುವ ಮುಖಾಂತರ ಕ್ರಮ ಕೈಗೊಳ್ಳಲಾಗುತ್ತಿದೆ. ರೂಢಿಗತವಾಗಿ MRP ನಿಬಂಧನೆಯನ್ನು ಉಲ್ಲಂಘಿಸುವ ಮದ್ಯ ಮಳಿಗೆಗಳ ಸನ್ನದನ್ನು ಅಮಾನತ್ತುಪಡಿಸುವ ಸಂಬಂಧ ಕೂಡ ಕ್ರಮ ಕೈಗೊಳ್ಳಲಾಗಿರುತ್ತದೆ.<br>ಎಂ.ಎಸ್.ಐ.ಎಲ್ ಮದ್ಯ ಮಳಿಗೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ MSIL ಸಂಸ್ಥೆಯಿಂದ ನೇಮಕವಾದ ಜಿಲ್ಲಾ ಸಂಪರ್ಕಾಧಿಕಾರಿಗಳು, ಸಗಟು ಮೇಲ್ವಿಚಾರಕರು ಮತ್ತು ಮಳಿಗೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರಿಗೆ ಸನ್ನದು ಷರತ್ತು ನಿಬಂಧನೆಗಳ ಪಾಲನೆ ಕುರಿತು ಅಗತ್ಯ ಸೂಚನೆಗಳನ್ನು ಕಾಲಕಾಲಕ್ಕೆ ನೀಡಲಾಗಿರುತ್ತದೆ. |
| ಇ | ಇಂತಹ ಮಳಿಗೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದರೂ ಇಲಾಖೆಯ ಅಧಿಕಾರಿ/ಸಿಬ್ಬಂದಿಗಳ ಮೇಲೆ ಸಾರ್ವಜನಿಕರಿಂದ ದೂರುಗಳು ಬಂದಿದ್ದಲ್ಲಿ ಅಂತಹವರ ಮೇಲೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಾಗಿದೆ? | ಎಂ.ಎಸ್.ಐ.ಎಲ್ ಮಳಿಗೆಗಳಲ್ಲಿ ಅಬಕಾರಿ ಇಲಾಖೆಯ ಯಾವುದೇ ಅಧಿಕಾರಿ/ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿರುವುದಿಲ್ಲ. ಎಂ.ಎಸ್.ಐ.ಎಲ್ ಮಳಿಗೆಗಳಲ್ಲಿ MSIL ಸಂಸ್ಥೆಯಿಂದ ನೇಮಿಸಲ್ಪಟ್ಟ ಅಧಿಕಾರಿ / ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿದ್ದು, ಸದರಿ ಸಿಬ್ಬಂದಿಗಳ ವಿರುದ್ಧ ಯಾವುದೇ ದೂರುಗಳು ಸ್ವೀಕೃತವಾಗಿರುವುದಿಲ್ಲ. |

ಆಇ 11 ಇಎಲ್‌ಕ್ಯೂ 2022

(ಕೆ.ಗೋಪಾಲಯ್ಯ)

ಅಬಕಾರಿ ಸಚಿವರು